**ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಲಯದ ಕಛೇರಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ತಳಮಹಡಿ, ಸಿಟಿ ಸಿವಿಲ್ ನ್ಯಾಯಾಲಯ ಸಂಕೀರ್ಣ, ಬೆಂಗಳೂರು-560 009.**

**ಅಧಿಸೂಚನೆ ಸಂಖ್ಯೆ: ಎಡಿಎಂ/156/2018 ದಿನಾಂಕ: 03.01.2019**

ವಿಷಯ: ಬೆಂಗಳೂರು ಗ್ರಾಮಾಂತರ ಜಿಲ್ಲಾ ನ್ಯಾಯಾಲಯ ಘಟಕದಲ್ಲಿ ಆರಂಭವಾಗಬೇಕಿರುವ ನ್ಯಾಯಾಲಯಗಳಿಗೆ ಮಂಜೂರಾಗಿರುವ 35 ಶೀಘ್ರಲಿಪಿಗಾರರ, 36 ಬೆರಳಚ್ಚುಗಾರರ, 01 ಬೆರಳಚ್ಚು-ನಕಲುಗಾರರ, 05 ಆದೇಶ ಜಾರಿಕಾರರು ಮತ್ತು 72 ಜವಾನರ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಬಗ್ಗೆ.

**ಸೂಚನೆ: ಸದರಿ ಹುದ್ದೆಗಳಿಗೆ ನ್ಯಾಯಾಲಯಗಳ ಕಾರ್ಯಾಚರಣೆ ಆರಂಭಗೊಂಡ ನಂತರ/ನ್ಯಾಯಾಧೀಶರು ನೇಮಕಗೊಂಡ ನಂತರ, ಆಯ್ಕೆಗೊಂಡ ಅಭ್ಯರ್ಥಿಗಳಿಗೆ ಮಾತ್ರ ನೇಮಕಾತಿ ಆದೇಶವನ್ನು ನೀಡಲಾಗುವುದು.**

<><><><>

ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು ಘಟಕದಲ್ಲಿ ಆರಂಭವಾಗಬೇಕಾಗಬೇಕಾಗಿರುವ ನ್ಯಾಯಾಲಯಗಳಿಗೆ ಮಂಜೂರಾಗಿರುವ 35 ಶೀಘ್ರಲಿಪಿಗಾರರ, 36 ಬೆರಳಚ್ಚುಗಾರರ, 01 ಬೆರಳಚ್ಚು-ನಕಲುಗಾರರ, 05 ಆದೇಶ ಜಾರಿಕಾರರು ಮತ್ತು 72 ಜವಾನರ ಹುದ್ದೆಗಳಿಗೆ ಅರ್ಹ ಅಭ್ಯರ್ಥಿಗಳಿಂದ **ಆನ್‌ಲೈನ್ ಮೂಲಕ** ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಬೆಂಗಳೂರು ಗ್ರಾಮಾಂತರ ಜಿಲ್ಲಾ ನ್ಯಾಯಾಲಯದ ವೆಬ್‌ಸೈಟ್ **https://districts.ecourts.gov.in/bangalorerural** ಮೂಲಕ ಆನ್‌ಲೈನ್ ನಲ್ಲಿ ದಿನಾಂಕ: **14.02.2019 ರಿಂದ 14.03.2019** ರ ವರೆಗೆ ಮಾತ್ರ ಸಲ್ಲಿಸತಕ್ಕದ್ದು.

ಆನ್‌ಲೈನ್ ಹೊರತುಪಡಿಸಿ, ಖುದ್ದಾಗಿ, ಅಂಚೆ ಮೂಲಕ ಅಥವಾ ಇನ್ನಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ: 14.03.2019

1. ಶೀಘ್ರಲಿಪಿಗಾರರು: (Stenographer)

ಹುದ್ದೆಗಳ ಸಂಖ್ಯೆ: 35

ವೇತನ ಶ್ರೇಣಿ – ರೂ. 27650-650-29600-750-32600-850-36000-950-39800-1100-46400-1250-52650 ಹಾಗೂ ಇತರೆ ಭತ್ಯೆಗಳು

ಹುದ್ದೆಗಳ ವರ್ಗೀಕರಣ:

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಅಂಗ ವಿಕಲ | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | - | 02 | 02 | - | 01 | 01 | - | **06** |
| ಪರಿಶಿಷ್ಟ ಪಂಗಡ | - | - | 01 | - | - | - | - | **01** |
| ಪ್ರವರ್ಗ 1 | - | - | - | - | - | - | 01* | **01** |
| ಪ್ರವರ್ಗ 2ಎ | - | 01 | 02 | - | 01 | 01 | - | **05** |
| ಪ್ರವರ್ಗ 2ಬಿ | - | - | 01 | - | - | - | 01* | **02** |
| ಪ್ರವರ್ಗ 3ಎ | 01 | - | - | - | - | - | - | **01** |
| ಪ್ರವರ್ಗ 3ಬಿ | 01 | 01 | - | - | - | - | - | **02** |
| ಸಾಮಾನ್ಯ | 04 | 05 | 04 | 02 | 01 | - | 01* | **17** |
| ಒಟ್ಟು | **06** | **09** | **10** | **02** | **03** | **02** | **03** | **35** |

*ಸೂಚನೆ: ಅಂಗವಿಕಲರಿಗೆಂದು ವರ್ಗೀಕರಿಸಲಾದ ಹುದ್ದೆಗಳನ್ನು ದೃಷ್ಟಿಮಾಂದ್ಯ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.

ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಯಾವುದೇ ಮುನ್ಸೂಚನೆ ಇಲ್ಲದೆ ಬದಲಾವಣೆಗೆ ಒಳಪಡಬಹುದು.

**ಶೈಕ್ಷಣಿಕ ವಿದ್ಯಾರ್ಹತೆ:**

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಹಿರಿಯ ಶ್ರೇಣಿಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಹಾಗೂ ಹಿರಿಯ ಶ್ರೇಣಿಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರತಕ್ಕದ್ದು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರತಕ್ಕದ್ದು.

**ಆಯ್ಕೆ ವಿಧಾನ:**

- ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2007 ಅನ್ವಯ ನಡೆಸಲಾಗುವುದು.
- ಅರ್ಹತಾ ಪರೀಕ್ಷೆಯಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಪ್ರತಿ ನಿಮಿಷಕ್ಕೆ 120 ಪದಗಳ ವೇಗದಂತೆ 05 ನಿಮಿಷಗಳ ಉಕ್ತಲೇಖನವನ್ನು ತೆಗೆದುಕೊಂಡು, 45 ನಿಮಿಷಗಳಲ್ಲಿ ಲಿಪ್ಯಂತರಿಸುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಮತ್ತು ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

**2. ಬೆರಳಚ್ಚುಗಾರರು: (Typist)**

**ಹುದ್ದೆಗಳ ಸಂಖ್ಯೆ: 36**

**ವೇತನ ಶ್ರೇಣಿ – ರೂ. 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು**

## ಹುದ್ದೆಗಳ ವರ್ಗೀಕರಣಃ

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಅಂಗ-ವಿಕಲ | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | 01 | 02 | - | 01 | - | 01 | 01* | 06 |
| ಪರಿಶಿಷ್ಟ ಪಂಗಡ | 01 | - | - | - | - | - | - | 01 |
| ಪ್ರವರ್ಗ 1 | - | 01 | - | - | - | - | - | 01 |
| ಪ್ರವರ್ಗ 2ಎ | 01 | 01 | 01 | 01 | - | 01 | 01* | 06 |
| ಪ್ರವರ್ಗ 2ಬಿ | - | 01 | 01 | - | - | - | - | 02 |
| ಪ್ರವರ್ಗ 3ಎ | - | 01 | - | - | - | - | - | 01 |
| ಪ್ರವರ್ಗ 3ಬಿ | - | - | 01 | - | - | - | - | 01 |
| ಸಾಮಾನ್ಯ | 03 | 05 | 05 | 02 | 01 | 01 | 01** | 18 |
| ಒಟ್ಟು | 06 | 11 | 08 | 04 | 01 | 03 | 03 | 36 |

**ಸೂಚನೆಃ * ದೃಷ್ಟಿಮಾಂದ್ಯ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.**

**** ಶ್ರವಣ ದೋಷ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.**

ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಯಾವುದೇ ಮುನ್ಸೂಚನೆ ಇಲ್ಲದೆ ಬದಲಾವಣೆಗೆ ಒಳಪಡಬಹುದು.

## ಶೈಕ್ಷಣಿಕ ವಿದ್ಯಾರ್ಹತೆಃ

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.
- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಹಿರಿಯ ಶ್ರೇಣಿಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರತಕ್ಕದ್ದು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರತಕ್ಕದ್ದು.

## ಆಯ್ಕೆ ವಿಧಾನಃ

- ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2007 ಅನ್ವಯ ನಡೆಸಲಾಗುವುದು.
- ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅಭ್ಯರ್ಥಿಯು 15 ನಿಮಿಷಗಳ ಕಾಲ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಉಕ್ತಲೇಖನವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
- ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳ ಅಧಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಿ 1:5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## 3. ಬೆರಳಚ್ಚು-ನಕಲುಗಾರರುಃ (Typist-Copyist)

**ಹುದ್ದೆಗಳ ಸಂಖ್ಯೆಃ 01**

**ವೇತನ ಶ್ರೇಣಿ – ರೂ. 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಇತರೆ ಭತ್ಯೆಗಳು**

## ಹುದ್ದೆಗಳ ವರ್ಗೀಕರಣಃ

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಅಂಗ ವಿಕಲ | ಒಟ್ಟು |
|---|---|---|---|---|---|---|---|---|
| ಸಾಮಾನ್ಯ | - | 01 | - | - | - | - | - | 01 |
| ಒಟ್ಟು | - | 01 | - | - | - | - | - | 01 |

ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಯಾವುದೇ ಮುನ್ಸೂಚನೆ ಇಲ್ಲದೆ ಬದಲಾವಣೆಗೆ ಒಳಪಡಬಹುದು.

**ಶೈಕ್ಷಣಿಕ ವಿದ್ಯಾರ್ಹತೆ:**

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರತಕ್ಕದ್ದು.

- ಕರ್ನಾಟಕ ಪ್ರೌಢ ಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಕಿರಿಯ ಶ್ರೇಣಿಯ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪರೀಕ್ಷೆಗಳಲ್ಲಿ ಉತ್ತೀರ್ಣರಾಗಿರತಕ್ಕದ್ದು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರತಕ್ಕದ್ದು.

**ಆಯ್ಕೆ ವಿಧಾನ:**

- ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2007 ಅನ್ವಯ ನಡೆಸಲಾಗುವುದು.

- ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು ಅಭ್ಯರ್ಥಿಯು 15 ನಿಮಿಷಗಳ ಕಾಲ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಉಕ್ತಲೇಖನವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಪಡೆದ ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.
- ಮೇಲೆ ಹೇಳಿದ ಅರ್ಹತಾ ಪರೀಕ್ಷೆಗಳಲ್ಲಿ ಗಳಿಸಿರುವ ಒಟ್ಟು ಶೇಕಡಾವಾರು ಅಂಕಗಳು ಮತ್ತು 15 ನಿಮಿಷಗಳ ಉಕ್ತಲೇಖನ ಕೊಡುವ ವಿಷಯವನ್ನು ಬೆರಳಚ್ಚು ಮಾಡುವ ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ಸಿದ್ಧಪಡಿಸಿ 1:5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸುವ ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

4. **ಆದೇಶ ಜಾರಿಕಾರರು:** (Process Server)

**ಹುದ್ದೆಗಳ ಸಂಖ್ಯೆ:**

**ವೇತನ ಶ್ರೇಣಿ** – **ರೂ. 19950-450-20400-500-22400-550-24600-600-27000-650-29600-750-32600-850-36000-950-37900 ಹಾಗೂ ಇತರೆ ಭತ್ಯೆಗಳು**

## ಹುದ್ದೆಗಳ ವರ್ಗೀಕರಣ:

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಅಂಗ ವಿಕಲ | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | - | 01 | - | - | - | - | - | 01 |
| ಪರಿಶಿಷ್ಟ ಪಂಗಡ | - | - | - | - | - | - | - | - |
| ಪ್ರವರ್ಗ 1 | - | - | - | - | - | - | - | - |
| ಪ್ರವರ್ಗ 2ಎ | - | - | - | - | - | - | - | - |
| ಪ್ರವರ್ಗ 2ಬಿ | - | - | - | - | - | - | - | - |
| ಪ್ರವರ್ಗ 3ಎ | - | - | - | - | - | - | - | - |
| ಪ್ರವರ್ಗ 3ಬಿ | - | 01 | - | - | - | - | - | 01 |
| ಸಾಮಾನ್ಯ | - | 01 | 01 | - | 01 | - | - | 03 |
| ಒಟ್ಟು | - | 03 | 01 | - | 01 | - | - | 05 |

ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಯಾವುದೇ ಮುನ್ಸೂಚನೆ ಇಲ್ಲದೆ ಬದಲಾವಣೆಗೆ ಒಳಪಡಬಹುದು.

## ಶೈಕ್ಷಣಿಕ ವಿದ್ಯಾರ್ಹತೆ:

(ಅ) ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

(ಆ) ಮೋಟಾರು ವಾಹನ ಚಾಲನಾ ಅನುಜ್ಞಾ ಪತ್ರ (Driving Licence - HMV/LMV) ಹೊಂದಿರುವವರಿಗೆ ಆದ್ಯತೆ ನೀಡಲಾಗುವುದು.

## ಆಯ್ಕೆ ವಿಧಾನ:

- ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2007 ಅನ್ವಯ ನಡೆಸಲಾಗುವುದು.
- ಆಯ್ಕೆಗೆ ಸಂದರ್ಶನ ಈ ಕೆಳಕಂಡಂತೆ ನಡೆಸಲಾಗುವುದು.

ನಿಗದಿಪಡಿಸಲಾದ ವಿದ್ಯಾರ್ಹತೆಯ ಪರೀಕ್ಷೆಯಲ್ಲಿ ಗಳಿಸಿದ ಒಟ್ಟು ಅಂಕಗಳ ಶೇಕಡಾವಾರುವಿನ ಆಧಾರದ ಮೇಲೆ 01 (ಒಂದು) ಹುದ್ದೆಗೆ 25 (ಇಪ್ಪತ್ತೈದು) ಅಭ್ಯರ್ಥಿಗಳ ಪ್ರಮಾಣದಲ್ಲಿ ಅಧಿಸೂಚನೆಯಲ್ಲಿ ಪ್ರಕಟಪಡಿಸಲಾದ ಖಾಲಿ ಹುದ್ದೆಗಳ ಸಂಖ್ಯೆಗೆ ಅನುಗುಣವಾಗಿ

ಅರ್ಹ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ ಕರೆಯಲಾಗುವುದು. ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

- ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## 5. ಜವಾನರುಃ **(Peon)**

**ಹುದ್ದೆಗಳ ಸಂಖ್ಯೆಃ 72**

**ವೇತನ ಶ್ರೇಣಿ - ರೂ. 17000-400-18600-450-20400-500-22400-550-24600-600-27000-650-28950 ಹಾಗೂ ಇತರೆ ಭತ್ಯೆಗಳು**

**ಹುದ್ದೆಗಳ ವರ್ಗೀಕರಣಃ**

| ವರ್ಗೀಕರಣ | ಇತರೆ | ಮಹಿಳೆ | ಗ್ರಾಮೀಣ | ಮಾಜಿ ಸೈನಿಕ | ಕನ್ನಡ ಮಾಧ್ಯಮ | ಯೋಜನಾ ನಿರಾಶ್ರಿತ | ಅಂಗ ವಿಕಲ | ಒಟ್ಟು |
|---|---|---|---|---|---|---|---|---|
| ಪರಿಶಿಷ್ಟ ಜಾತಿ | 01 | 04 | 04 | 01 | 01 | - | - | 11 |
| ಪರಿಶಿಷ್ಟ ಪಂಗಡ | - | 01 | 01 | - | - | - | - | 02 |
| ಪ್ರವರ್ಗ I | - | 01 | 01 | 01 | - | - | - | 03 |
| ಪ್ರವರ್ಗ 2ಎ | 01 | 04 | 03 | 01 | 01 | - | - | 10 |
| ಪ್ರವರ್ಗ 2ಬಿ | - | 01 | 01 | 01 | - | - | - | 03 |
| ಪ್ರವರ್ಗ 3ಎ | 01 | 01 | 01 | - | - | - | - | 03 |
| ಪ್ರವರ್ಗ 3ಬಿ | 01 | 01 | 01 | 01 | - | - | - | 04 |
| ಸಾಮಾನ್ಯ | 05 | 12 | 10 | 03 | 02 | 02 | 02* | 36 |
| ಒಟ್ಟು | 09 | 25 | 22 | 08 | 04 | 02 | 02 | 72 |

***ಸೂಚನೆಃ ಅಂಗವಿಕಲರಿಗೆಂದು ವರ್ಗೀಕರಿಸಲಾದ ಹುದ್ದೆಗಳನ್ನು ಶ್ರವಣದೋಷ ಮತ್ತು ಚಲನವಲನ ವೈಕಲ್ಯ ಅಭ್ಯರ್ಥಿಗಳಿಗೆ ಮೀಸಲಿರಿಸಲಾಗಿದೆ.**

ಹುದ್ದೆಗಳ ಸಂಖ್ಯೆ ಮತ್ತು ವರ್ಗೀಕರಣವು ಯಾವುದೇ ಮುನ್ಸೂಚನೆ ಇಲ್ಲದೆ ಬದಲಾವಣೆಗೆ ಒಳಪಡಬಹುದು.

**ಶೈಕ್ಷಣಿಕ ವಿದ್ಯಾರ್ಹತೆಃ**

(ಅ) 7ನೇ ತರಗತಿಯಲ್ಲಿ ತೇರ್ಗಡೆ ಹೊಂದಿರಬೇಕು.

(ಆ) ಕನ್ನಡ ಭಾಷೆಯನ್ನು ಓದಲು ಮತ್ತು ಬರೆಯಲು ತಿಳಿದಿರಬೇಕು.

## ಆಯ್ಕೆ ವಿಧಾನಃ

- ಅಭ್ಯರ್ಥಿಗಳ ಆಯ್ಕೆಯನ್ನು ಕರ್ನಾಟಕ ಅಧೀನ ನ್ಯಾಯಾಲಯಗಳು (ಲಿಪಿಕ ಮತ್ತು ಇತರೆ ಹುದ್ದೆಗಳು) (ನೇಮಕಾತಿ) (ತಿದ್ದುಪಡಿ) ನಿಯಮಗಳು, 2007 ಅನ್ವಯ ನಡೆಸಲಾಗುವುದು.

- 7ನೇ ತರಗತಿಯ ಗರಿಷ್ಠ ಅಂಕಗಳನ್ನಾಧರಿಸಿ, ಒಂದು ಹುದ್ದೆಗೆ 10 ಅಭ್ಯರ್ಥಿಗಳನ್ನು ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು.

- ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## ಸೂಚನೆಃ

- 7ನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೇ (ಗ್ರೇಡ್) ಅದನ್ನು ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರು ನಮೂದು ಇರುವ ಅಂಕಪಟ್ಟಿಯನ್ನು ಕಡ್ಡಾಯವಾಗಿ ಸಕ್ಷಮ ಪ್ರಾಧಿಕಾರದಿಂದ ಪಡೆದಿರಬೇಕು ಹಾಗೂ ಅಂಕಪಟ್ಟಿಯಲ್ಲಿ ತ್ರೈಮಾಸಿಕ ಅಂಕಗಳಿದ್ದರೆ ಎಲ್ಲಾ ತ್ರೈಮಾಸಿಕ ಅಂಕಗಳನ್ನು ಕ್ರೃಢೀಕರಿಸಿದ ಅಂಕಪಟ್ಟಿಯ ಅಂಕಗಳನ್ನು ಅರ್ಜಿ ನಮೂನೆಯಲ್ಲಿ ನಮೂದಿಸತಕ್ಕದ್ದು ಹಾಗೂ ಅಂಕಪಟ್ಟಿಯು ಕಡ್ಡಾಯವಾಗಿ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಧೃಡೀಕರಿಸಲ್ಪಟ್ಟಿರತಕ್ಕದ್ದು ಮತ್ತು ಸದರಿ ಕ್ಷೇತ್ರ ಶಿಕ್ಷಣಾಧಿಕಾರಿಯವರಿಂದ ಧೃಡೀಕರಿಸಲ್ಪಟ್ಟ ಅಂಕಪಟ್ಟಿಯನ್ನು ಸಂದರ್ಶನದ ಸಮಯದಲ್ಲಿ ತಪ್ಪದೇ ಹಾಜರು ಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ಹಿಂದುಳಿದ ವರ್ಗಗಳ ಹುದ್ದೆಗಳನ್ನು ಸಾಮಾನ್ಯ ವರ್ಗದ ಇತರೆ ಅಭ್ಯರ್ಥಿಗಳಿಂದ ಭರ್ತಿ ಮಾಡಲಾಗುವುದು.
- ಮೇಲ್ಕಾಣಿಸಿದ 7ನೇ ತರಗತಿಯ ಅಂಕಪಟ್ಟಿಯ ಈ ಅಧಿಸೂಚನೆಯಲ್ಲಿ ನಮೂದಿಸಿದ ಅರ್ಜಿ ಸಲ್ಲಿಸುವ ಕೊನೆಯ ದಿನಾಂಕದೊಳಗೆ ಪಡೆದಿರಬೇಕು.
- ಮೇಲ್ಕಾಣಿಸಿದ 7ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯಾಗಿರಬೇಕು ಮತ್ತು ಬೇರೆ ರೀತಿಯಲ್ಲಿ ಅಂದರೆ ಗ್ರೇಡ್‌ಗಳಲ್ಲಿ ಇದ್ದ ಅಂಕಪಟ್ಟಿಗಳನ್ನು ಲಗತ್ತಿಸಿದರೆ ಅರ್ಜಿಗಳನ್ನು ತೀರಸ್ಕರಿಸಲಾಗುವುದು.
- 7ನೇ ತರಗತಿಯ ಅಂಕಗಳನ್ನೊಳಗೊಂಡ ಅಂಕಪಟ್ಟಿಯು ಸಂಬಂಧಿತ ಮುಖ್ಯೋಪಾದ್ಯಾಯರಿಂದ ಸಹಿ ಹಾಗೂ ಶಾಲೆಯ ಮೊಹರನ್ನು ಹಾಕಿಸಿಕೊಂಡಿರಬೇಕು ಮತ್ತು ಆ ಅಂಕಪಟ್ಟಿಗೆ ಸಂಬಂಧಿಸಿದ ಕ್ಷೇತ್ರ ಶಿಕ್ಷಣಾಧಿಕಾರಿಯ ಮೇಲುರುಜುವನ್ನು ಕಡ್ಡಾಯವಾಗಿ ಪಡೆದಿರಬೇಕು. ಹಾಗೇ ಇಲ್ಲದ ಪಕ್ಷದಲ್ಲಿ ಅಂತಹ ಅರ್ಜಿಗಳನ್ನು ತೀರಸ್ಕರಿಸಲಾಗುವುದು.

## ನಿಗದಿತ ಅರ್ಜಿ ಶುಲ್ಕಃ

| ವಿವಿಧ ವರ್ಗೀಕರಣ | ಶೀಘ್ರಲಿಪಿಕಾರರ ಹುದ್ದೆಗೆ | ಬೆರಳಚ್ಚು ಮತ್ತು ಬೆರಳಚ್ಚು-ನಕಲುಕಾರರ ಹುದ್ದೆಗೆ | ಆದೇಶ ಜಾರಿಕಾರರ ಹುದ್ದೆಗೆ | ಜವಾನರ ಹುದ್ದೆಗೆ |
|---|---|---|---|---|
| ಸಾಮಾನ್ಯ ಅರ್ಹತೆ, ಪ್ರವರ್ಗ 2ಎ, 2ಬಿ, 3ಎ, 3ಬಿ ಅಭ್ಯರ್ಥಿಗಳಿಗೆ | ರೂ 200/- | ರೂ 200/- | ರೂ 200/- | ರೂ 200/- |
| ಪ.ಜಾ., ಪ.ಪಂ., ಪ್ರವರ್ಗ-1 ಅಭ್ಯರ್ಥಿಗಳಿಗೆ ಹಾಗೂ ಅಂಗವಿಕಲ (ವಿಕಲಚೇತನ) ಅಭ್ಯರ್ಥಿಗಳಿಗೆ | ರೂ 100/- | ರೂ 100/- | ರೂ 100/- | ರೂ 100/- |

## ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನಃ

ನಿಗದಿತ ಶುಲ್ಕವನ್ನು ನ್ಯಾಯಾಲಯದ ವೆಬ್‌ಸೈಟ್ https://districts.ecourts.gov.in/bangalorerural ನಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ **State Bank Collect** ಮೂಲಕ **online payment through net banking / credit card / debit card/ Challan download** ಸೌಲಭ್ಯದ ಮೂಲಕ ಪಾವತಿಸತಕ್ಕದ್ದು. ಶುಲ್ಕವನ್ನು ಆನ್‌ಲೈನ್ ಮೂಲಕ ಪಾವತಿ ಮಾಡಲು ಇಚ್ಚಿಸದ ಅಭ್ಯರ್ಥಿಗಳು ಚಲನ್ ಪ್ರತಿಯನ್ನು ಅಧಿಕೃತ ವೆಬ್‌ಸೈಟ್‌ನಿಂದ ಡೌನ್‌ಲೋಡ್ ಮಾಡಿಕೊಂಡು ಅದರ Print Out ಅನ್ನು ಪಡೆದುಕೊಂಡು ಎಸ್.ಬಿ.ಐ.ನ ಯಾವುದೇ ಶಾಖೆಗೆ ಹಾಜರುಪಡಿಸಿ ಶುಲ್ಕವನ್ನು ಪಾವತಿಸತಕ್ಕದ್ದು. ಇದನ್ನು ಹೊರತುಪಡಿಸಿ ಯಾವುದೇ ಡಿಮಾಂಡ್ ಡ್ರಾಫ್ಟ್, ಪೋಸ್ಟಲ್ ಆರ್ಡರ್, ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ನಿಗದಿತ ಶುಲ್ಕ ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

## ಅಭ್ಯರ್ಥಿಗಳು ONLINE ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದುಃ

- ಅಭ್ಯರ್ಥಿಗಳು ಅರ್ಜಿಯನ್ನು **ONLINE** ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು. ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

(1) ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸುವ ಜನ್ಮ ದಿನಾಂಕ, ವಿದ್ಯಾರ್ಹತೆ, ಮೀಸಲಾತಿ ಹಾಗೂ ವಯೋಮಿತಿ ಸಡಿಲಿಕೆ, ಇತ್ಯಾದಿ ವಿವರಗಳನ್ನು ಮಾತ್ರ ಗಣನೆಗೆ ತೆಗೆದುಕೊಳ್ಳಲಾಗುವುದು ಹಾಗೂ ಈ ಬಗ್ಗೆ ಅನಂತರದಲ್ಲಿ ಬದಲಾವಣೆ ಕುರಿತಂತೆ ಸಲ್ಲಿಸುವ ಯಾವುದೇ ಕೋರಿಕೆ ಪತ್ರಗಳನ್ನು ಪುರಸ್ಕರಿಸಲಾಗುವುದಿಲ್ಲ.

(2) ಅಭ್ಯರ್ಥಿಯು ಮೊಬೈಲ್ ಸಂಖ್ಯೆಯನ್ನು ಕಡ್ಡಾಯವಾಗಿ ನಮೂದಿಸುವುದು ಹಾಗೂ ಇ-ಮೇಲ್ ಐಡಿಯನ್ನು ಹೊಂದಿದ್ದಲ್ಲಿ ನಮೂದಿಸುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ.

(3) ಅಭ್ಯರ್ಥಿಯ ಭಾವಚಿತ್ರ ಮತ್ತು ಸಹಿಯನ್ನು ಸ್ಕ್ಯಾನ್ ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

(ಅ) ಬಣ್ಣದ ಭಾವಚಿತ್ರವು ಇತ್ತೀಚಿನದಾಗಿದ್ದು ಅಳತೆಯಲ್ಲಿ **5cm** ಉದ್ದ **x 3.6cm** ಅಗಲವುಳ್ಳದ್ದಾಗಿರಬೇಕು ಮತ್ತು **50kb** ಅಳತೆಯದ್ದಾಗಿರಬೇಕು ಹಾಗೂ ಅದು **jpg** ನಮೂನೆಯಲ್ಲಿರಬೇಕು. ಭಾವಚಿತ್ರದ ಹಿಂಬದಿಯು ಬಿಳಿಬಣ್ಣದ್ದಾಗಿರಬೇಕು.

(ಆ) ಭಾವಚಿತ್ರವನ್ನು ಸ್ಕ್ಯಾನ್ ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

(ಇ) ಅಭ್ಯರ್ಥಿಯು ಕಪ್ಪು ಬಾಲ್‌ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (**2.5cm** ಉದ್ದ**x7.5cm** ಅಗಲವುಳ್ಳದ್ದಾಗಿರಬೇಕು ಮತ್ತು **26kb** ಅಳತೆಯದ್ದಾಗಿರಬೇಕು ಹಾಗೂ **jpg** ನಮೂನೆಯಲ್ಲಿರಬೇಕು) ಅಪ್‌ಲೋಡ್ ಮಾಡಬೇಕು.

(4) ತದನಂತರ ಅಭ್ಯರ್ಥಿಯು **ONLINE** ಅರ್ಜಿಯಲ್ಲಿ ಕೇಳಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು **download** ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಕಾಯ್ದಿರಿಸಿಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆಯ/ಸಂದರ್ಶನದ/ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಹಾಜರು ಪಡಿಸತಕ್ಕದ್ದು.

(5) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ, ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ ಹಾಗೂ ಬೇರೆ ಯಾವುದೇ ನೇಮಕಾತಿಗೂ ಹೊಂದಾಣಿಕೆ ಮಾಡಿಕೊಳ್ಳುವುದಿಲ್ಲ.

(6) ನ್ಯಾಯಾಲಯದ ಅಧಿಕೃತ ವೆಬ್‌ಸೈಟ್ **https://districts.ecourts.gov.in/bangalorerural** ನಲ್ಲಿ ಕೊನೆಯ ದಿನಾಂಕ **14.03.2019** ವರೆಗೂ ಅರ್ಜಿಗಳನ್ನು ಸಲ್ಲಿಸಬಹುದಾಗಿದೆ.

**(ಅ) ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು / ಸಲ್ಲಿಸಲು ದಿನಾಂಕ 14.03.2019 ರ ರಾತ್ರಿ 11.59ರ ವರೆಗೆ ಅವಕಾಶವಿರುತ್ತದೆ.**

**(ಆ) ಶುಲ್ಕವನ್ನು ಚಲನ್ ಮುಖಾಂತರ ಪಾವತಿಸಲು ದಿನಾಂಕ 15.03.2019 ಕಡೆಯ ದಿನಾಂಕವಾಗಿದ್ದು, ಅದರೊಳಗೆ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ ಶಾಖೆಯ ವ್ಯವಹಾರದ ವೇಳೆಯಲ್ಲಿ ಪಾವತಿಸತಕ್ಕದ್ದು.**

(8) ಅರ್ಹತಾ ಪರೀಕ್ಷೆಯ ವೇಳಾಪಟ್ಟಿ ಮತ್ತು ಸಂದರ್ಶನದ ವೇಳಾಪಟ್ಟಿಯನ್ನು ಈ ನ್ಯಾಯಾಲಯದವೆಬ್‌ಸೈಟ್ **https://districts.ecourts.gov.in/bangalorerural** ನಲ್ಲಿ ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ/ಸಂದರ್ಶನಕ್ಕೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಪ್ರವೇಶ ಪತ್ರಗಳನ್ನು ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ರವಾನಿಸಲಾಗುವುದಿಲ್ಲ.

(9) ಅರ್ಹ ಅಭ್ಯರ್ಥಿಗಳಿಗೆ **SMS** ಹಾಗೂ ಇ-ಮೇಲ್ ಮುಖಾಂತರ ಮಾಹಿತಿ ನೀಡಲಾಗುವುದು. ಒಂದು ವೇಳೆ **SMS** ಅಥವಾ ಇ-ಮೇಲ್ ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರ ಹೊಣೆಯಾಗಿರುವುದಿಲ್ಲ, ಅರ್ಹ ಅಭ್ಯರ್ಥಿಗಳು **https://districts.ecourts.gov.in/bangalorerural** ವೆಬ್‌ಸೈಟ್‌ನಿಂದ ಅರ್ಹತಾ ಪರೀಕ್ಷೆಯ ಪ್ರವೇಶಪತ್ರವನ್ನು ಮತ್ತು ಸಂದರ್ಶನದ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಳ್ಳುವುದು. **ಅಭ್ಯರ್ಥಿಗಳು ಕಡ್ಡಾಯವಾಗಿ ಪ್ರವೇಶಪತ್ರವನ್ನು ಡೌನ್‌ಲೋಡ್ ಮಾಡಿಕೊಂಡು ಒಂದು ಮೂಲ ಗುರುತಿನ ಚೀಟಿಯೊಂದಿಗೆ** (ವೋಟರ್ ಐಡಿ/ಆಧಾರ್ ಕಾರ್ಡ್/ಡ್ರೈವಿಂಗ್ ಲೈಸೆನ್ಸ್/ ಪ್ಯಾನ್ ಕಾರ್ಡ್/ಪಾಸ್‌ಪೋರ್ಟ್) **ಅರ್ಹತಾ ಪರೀಕ್ಷೆಗೆ ಮತ್ತು ಸಂದರ್ಶನಕ್ಕೆ ಹಾಜರಾಗತಕ್ಕದ್ದು.**

**ವಯೋಮಿತಿಃ**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂತೆ ಅಭ್ಯರ್ಥಿಯುಃ

ಕನಿಷ್ಠ ವಯೋಮಿತಿ ಃ 18 ವರ್ಷ

ಗರಿಷ್ಠ ವಯೋಮಿತಿ ಃ ಸಾಮಾನ್ಯ ವರ್ಗ -35 ವರ್ಷ

ಪ್ರವರ್ಗ 2ಎ ಃ 2ಬಿ ಃ 3ಎ ಃ 3ಬಿ -38 ವರ್ಷ

ಪ.ಜಾ ಃ ಪ.ಪಂ. ಃ ಪ್ರವರ್ಗ-1 -40 ವರ್ಷ

ಸರ್ಕಾರಿ ಸೇವೆಯಲ್ಲಿರುವವರಿಗೆ, ವಿಧವೆಯರಿಗೆ, ಮಾಜಿ ಸೈನಿಕರಿಗೆ ಹಾಗೂ ಅಂಗವಿಕಲರಿಗೆ ಕರ್ನಾಟಕ ಸಿವಿಲ್ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮಗಳು, 1977 ರ ಅನುಸಾರ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

**ವಯೋಮಿತಿ ಸಡಿಲಿಕೆ:**

ಈ ಕೆಳಗಿನ ಸಂದರ್ಭಗಳಲ್ಲಿ ನೇಮಕಾತಿಯ ಗರಿಷ್ಟ ವಯೋಮಿತಿಯನ್ನು ಆಯಾ ಅಭ್ಯರ್ಥಿಗಳಿಗೆ ನಮೂದಿಸಿರುವ ಮಟ್ಟಿಗೆ ಹೆಚ್ಚಿಸಲಾಗುವುದು.

(1) ಅಭ್ಯರ್ಥಿಯು ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ್ದಲ್ಲಿ, ಗರಿಷ್ಟ ವಯೋಮಿತಿಯನ್ನು ಅವರು ಎಷ್ಟು ವರ್ಷಗಳ ಅವಧಿಗೆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಎರಡರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳ ಸಡಿಲಿಕೆಯನ್ನು ನೀಡಲಾಗುವುದು.

(2) ಅಭ್ಯರ್ಥಿಯು ಮಾಜಿ ಸೈನಿಕರಾಗಿದ್ದಲ್ಲಿ, ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು.

(3) ಅಭ್ಯರ್ಥಿಯು ಅಂಗವಿಕಲರಾಗಿದ್ದಲ್ಲಿ, ವಿಧವೆಯಾಗಿದ್ದಲ್ಲಿ ಮತ್ತು ಜೀತ ಕಾರ್ಮಿಕರಾಗಿದ್ದಲ್ಲಿ 10 ವರ್ಷಗಳು.

(4) ಅಭ್ಯರ್ಥಿಯು ಕರ್ನಾಟಕ ರಾಜ್ಯದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ ಪಕ್ಷದಲ್ಲಿ, ಗರಿಷ್ಟ ವಯೋಮಿತಿಯನ್ನು ಅಭ್ಯರ್ಥಿಯು ಎಷ್ಟು ವರ್ಷಗಳ ಅವಧಿಗೆ ಆ ಹುದ್ದೆಯಲ್ಲಿ ಸೇವೆ ಸಲ್ಲಿಸಿರುವರೋ ಅಥವಾ ಹಿಂದೆ ಸೇವೆ ಸಲ್ಲಿಸಿದ್ದಾರೋ ಅಷ್ಟು ವರ್ಷಗಳ ಅಥವಾ 05 ವರ್ಷಗಳ ಅವಧಿ, ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು.

(5) ಅಭ್ಯರ್ಥಿಯು ನ್ಯಾಷನಲ್ ಕೆಡೆಟ್ ಕಾರ್ಪ್ಸ್‌ನಲ್ಲಿ ಪೂರ್ಣ ಕಾಲಿಕ ಪರೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಯಾಗಿದ್ದರೆ, ಅಂತಹ ಕೆಡೆಟ್ ಪರೀಕ್ಷಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(6) ಅಭ್ಯರ್ಥಿಯು ರಾಜ್ಯ ಸರ್ಕಾರದಿಂದ ಪುರುಸ್ಕೃತವಾದ ಗ್ರಾಮೀಣ ಔದಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು, ಗ್ರಾಮಸಮೂಹ ಪರಿಶೀಲರಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಪಕ್ಷದಲ್ಲಿ ಅಂತಹ ಗ್ರಾಮಸಮೂಹ ಪರಿಶೀಲಕರಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು.

(7) ಮಾಜಿ ಸೈನಿಕರು, ವಿಧವೆಯರು, ಅಂಗವಿಕಲರು ಮತ್ತು ಜೀತ ಕಾರ್ಮಿಕರು ಹಾಗೂ ವಯೋಮಿತಿ ರಿಯಾಯಿತಿಗೆ ಅರ್ಹರಾದ ಇನ್ನಿತರರು ವಯೋಮಿತಿ ರಿಯಾಯಿತಿ ಕೋರಲು ಸಕ್ಷಮ ಪ್ರಾಧಿಕಾರದಿಂದ ಪಡೆದಿರುವ ಪ್ರಮಾಣಪತ್ರಗಳನ್ನು ಸಲ್ಲಿಸಿರಬೇಕು.

## ಇತರೆ ಸೂಚನೆಗಳು:-

### (ಅ) ಶೀಘ್ರಲಿಪಿಗಾರ:-

(1) ಅಭ್ಯರ್ಥಿಗಳು ಸಂದರ್ಶನದ/ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು:

(ಅ) ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ

(ಆ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ

(ಇ) ಎಸ್.ಎಸ್.ಎಲ್.ಸಿ. ಅಂಕಪಟ್ಟಿ

(ಈ) ಕನ್ನಡ ಮತ್ತು ಇಂಗ್ಲಿಷ್ ಪ್ರೌಢದರ್ಜೆ ಶೀಘ್ರಲಿಪಿ ಪರೀಕ್ಷೆಗಳ ಅಂಕಪಟ್ಟಿಗಳು

(ಉ) ಕನ್ನಡ ಮತ್ತು ಇಂಗ್ಲಿಷ್ ಪ್ರೌಢದರ್ಜೆ ಬೆರಳಚ್ಚು ಪರೀಕ್ಷೆಗಳ ಅಂಕಪಟ್ಟಿಗಳು

(ಊ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ನಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ನಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳು.

(ಋ) ಗ್ರಾಮೀಣ/ಕನ್ನಡ ಮಾಧ್ಯಮ/ಮಾಜಿ ಸೈನಿಕ/ಅಂಗವಿಕಲ (ವಿಕಲಚೇತನ)/ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳು.

(ಎ) ಅಂಗವಿಕಲ (ವಿಕಲಚೇತನ) ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕ: 19.11.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇನೆನಿ 2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿನ ವೈದ್ಯಕೀಯ ಪ್ರಮಾಣಪತ್ರ (ಇತರೆ ನಮೂನೆಯ ಪ್ರಮಾಣಪತ್ರ/ಗುರುತಿನ ಚೀಟಿಗಳನ್ನು ಪರಿಗಣಿಸುವುದಿಲ್ಲ)

(5) ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವುದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವುದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವುದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವುದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಅಥವಾ ಅನುಸರಿಸಲು ಪ್ರಯತ್ನಿಸಿರುವುದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅವರ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಅಲ್ಲದೇ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

## (ಇ) ಬೆರಳಚ್ಚು-ನಕಲುಗಾರರು:-

(1) ಅಭ್ಯರ್ಥಿಗಳು ಸಂದರ್ಶನದ/ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು:

(ಅ) ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ

(ಆ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ

(ಇ) ಎಸ್.ಎಸ್.ಎಲ್.ಸಿ. ಅಂಕಪಟ್ಟಿ

(ಈ) ಕನ್ನಡ ಮತ್ತು ಇಂಗ್ಲಿಷ್ ಕಿರಿಯದರ್ಜೆ ಬೆರಳಚ್ಚು ಪರೀಕ್ಷೆಗಳ ಅಂಕಪಟ್ಟಿಗಳು

(ಉ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ನಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ನಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳು.

(ಊ) ಗ್ರಾಮೀಣ/ಕನ್ನಡ ಮಾಧ್ಯಮ/ಮಾಜಿ ಸೈನಿಕ/ಅಂಗವಿಕಲ (ವಿಕಲಚೇತನ)/ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳು.

(ಋ) ಅಂಗವಿಕಲ (ವಿಕಲಚೇತನ) ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕ: 19.11.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇನೆನಿ 2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿನ ವೈದ್ಯಕೀಯ ಪ್ರಮಾಣಪತ್ರ (ಇತರೆ ನಮೂನೆಯ ಪ್ರಮಾಣಪತ್ರ/ಗುರುತಿನ ಚೀಟಿಗಳನ್ನು ಪರಿಗಣಿಸುವುದಿಲ್ಲ)

(ಎ) ಮಾಜಿ ಸೈನಿಕ ವರ್ಗದ ಮೀಸಲಾತಿ ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರ.

(ಏ) ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಪಡೆದ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರ ಹಾಗೂ ಶಾಲಾ ನಡತೆ ಪ್ರಮಾಣಪತ್ರಗಳು.

(ಐ) ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಸಮಯದಲ್ಲಿಯೇ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿರುವ ನಿರಾಕ್ಷೇಪಣ ಪ್ರಮಾಣಪತ್ರ.

(2) ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

(3) ಅರ್ಹತಾ ಪರೀಕ್ಷೆಗೆ/ಸಂದರ್ಶನಕ್ಕೆ/ದಾಖಲಾತಿ ಪರಿಶೀಲನೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

(4) ಈ ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

(5) ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವುದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವುದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವುದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವುದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಅಥವಾ ಅನುಸರಿಸಲು ಪ್ರಯತ್ನಿಸಿರುವುದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅವರ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಅಲ್ಲದೇ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

**(ಈ) ಆದೇಶ ಜಾರಿಕಾರರು:-**

(1) ಅಭ್ಯರ್ಥಿಗಳು ಸಂದರ್ಶನದ/ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು:

(ಅ) ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ

(ಆ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ

(ಇ) ಎಸ್.ಎಸ್.ಎಲ್.ಸಿ. ಅಂಕಪಟ್ಟಿ

(ಈ) ಮೋಟಾರು ವಾಹನ ಚಾಲನಾ ಅನುಜ್ಞಾ ಪತ್ರ (Driving Licence - HMV/LMV), ಹೊಂದಿದ್ದಲ್ಲಿ

(ಉ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ನಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ನಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳು.

(ಊ) ಗ್ರಾಮೀಣ/ಕನ್ನಡ ಮಾಧ್ಯಮ/ಮಾಜಿ ಸೈನಿಕ/ಅಂಗವಿಕಲ (ವಿಕಲಚೇತನ)/ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳು.

(ಋ) ಅಂಗವಿಕಲ (ವಿಕಲಚೇತನ) ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕಃ 19.11.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆಃ ಸಿಆಸುಇ 115 ಸೇನೆನಿ 2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿನ ವೈದ್ಯಕೀಯ ಪ್ರಮಾಣಪತ್ರ (ಇತರೆ ನಮೂನೆಯ ಪ್ರಮಾಣಪತ್ರ/ಗುರುತಿನ ಚೀಟಿಗಳನ್ನು ಪರಿಗಣಿಸುವುದಿಲ್ಲ)

(ಎ) ಮಾಜಿ ಸೈನಿಕ ವರ್ಗದ ಮೀಸಲಾತಿ ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರ.

(ಏ) ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಪಡೆದ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರ ಹಾಗೂ ಶಾಲಾ ನಡತೆ ಪ್ರಮಾಣಪತ್ರಗಳು.

(ಐ) ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಸಮಯದಲ್ಲಿಯೇ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿರುವ ನಿರಾಕ್ಷೇಪಣ ಪ್ರಮಾಣಪತ್ರ.

(2) ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

(3) ಸಂದರ್ಶನಕ್ಕೆ/ದಾಖಲಾತಿ ಪರಿಶೀಲನೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

(4) ಈ ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

(5) ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವುದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವುದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವುದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವುದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಅಥವಾ ಅನುಸರಿಸಲು ಪ್ರಯತ್ನಿಸಿರುವುದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅವರ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಅಲ್ಲದೇ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

**(ಉ) ಜವಾನರು:-**

(1) ಅಭ್ಯರ್ಥಿಗಳು ಸಂದರ್ಶನದ/ದಾಖಲಾತಿ ಪರಿಶೀಲನೆಯ ಸಮಯದಲ್ಲಿ ಈ ಕೆಳಕಂಡ ದಾಖಲೆಗಳನ್ನು ಹಾಜರುಪಡಿಸತಕ್ಕದ್ದು:

(ಅ) ಆನ್‌ಲೈನ್ ಮೂಲಕ ಸಲ್ಲಿಸಲಾದ ಅರ್ಜಿಯ ಪ್ರತಿ

(ಆ) ಹುದ್ದೆಗೆ ನಿಗದಿಪಡಿಸಿದ ಶುಲ್ಕವನ್ನು ಪಾವತಿಸಿದ ರಶೀದಿ ಪ್ರತಿ

(ಇ) 7ನೇ ತರಗತಿ ಅಂಕಪಟ್ಟಿ

(ಈ) ಜನ್ಮ ದಿನಾಂಕವನ್ನು ದೃಢೀಕರಿಸುವ ದಾಖಲಾತಿ (ಜನನ ಪ್ರಮಾಣಪತ್ರ / ಶಾಲಾ ವರ್ಗಾವಣೆ ಪ್ರಮಾಣಪತ್ರ / ಎಸ್.ಎಸ್.ಎಲ್.ಸಿ ಅಂಕಪಟ್ಟಿ)

(ಉ) ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ನಮೂನೆ-ಡಿ ನಲ್ಲಿ, ಪ್ರವರ್ಗ-1ರ ಅಭ್ಯರ್ಥಿಗಳು ನಮೂನೆ-ಇ ನಲ್ಲಿ ಮತ್ತು 2ಎ, 2ಬಿ, 3ಎ ಮತ್ತು 3ಬಿ ಗೆ ಸೇರಿದ ಅಭ್ಯರ್ಥಿಗಳು ನಮೂನೆ-ಎಫ್ ನಲ್ಲಿ ಸಂಬಂಧಿಸಿದ ತಹಶೀಲ್ದಾರರಿಂದ ಪಡೆದ ಚಾಲ್ತಿಯಲ್ಲಿರುವ ಜಾತಿ ಮತ್ತು ಆದಾಯ ಪ್ರಮಾಣಪತ್ರಗಳು.

(ಊ) ಗ್ರಾಮೀಣ/ಕನ್ನಡ ಮಾಧ್ಯಮ/ಮಾಜಿ ಸೈನಿಕ/ಅಂಗವಿಕಲ (ವಿಕಲಚೇತನ)/ಯೋಜನಾ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಸಕ್ಷಮ ಪ್ರಾಧಿಕಾರಗಳು ನೀಡಿದ ಪ್ರಮಾಣಪತ್ರಗಳು.

(ಋ) ಅಂಗವಿಕಲ (ವಿಕಲಚೇತನ) ಮೀಸಲಾತಿ ಕೋರುವ ಅಭ್ಯರ್ಥಿಗಳು ದಿನಾಂಕ: 19.11.2005ರ ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಿಆಸುಇ 115 ಸೇನೆನಿ 2005ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿನ ವೈದ್ಯಕೀಯ ಪ್ರಮಾಣಪತ್ರ (ಇತರೆ ನಮೂನೆಯ ಪ್ರಮಾಣಪತ್ರ/ಗುರುತಿನ ಚೀಟಿಗಳನ್ನು ಪರಿಗಣಿಸುವುದಿಲ್ಲ).

(ಎ) ಮಾಜಿ ಸೈನಿಕ ವರ್ಗದ ಮೀಸಲಾತಿ ಕೋರುವ ಅಭ್ಯರ್ಥಿಗಳು ಸೈನಿಕ ಸೇವೆಯಿಂದ ಬಿಡುಗಡೆಯಾದ/ವಿಮುಕ್ತಿ ಹೊಂದಿದ ಬಗೆಗಿನ ಪ್ರಮಾಣಪತ್ರ.

(ಏ) ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 6 ತಿಂಗಳ ಒಳಗೆ ಪಡೆದ ಇಬ್ಬರು ಗೌರವಾನ್ವಿತ ವ್ಯಕ್ತಿಗಳು ನೀಡಿರುವ ನಡತೆ ಪ್ರಮಾಣಪತ್ರ ಹಾಗೂ ಶಾಲಾ ನಡತೆ ಪ್ರಮಾಣಪತ್ರಗಳು.

(ಐ) ಸರ್ಕಾರಿ ಸೇವೆಯಲ್ಲಿರುವ ಅಭ್ಯರ್ಥಿಗಳು ಅರ್ಜಿಗಳನ್ನು ಸಲ್ಲಿಸುವ ಸಮಯದಲ್ಲಿಯೇ ಸಂಬಂಧಪಟ್ಟ ಪ್ರಾಧಿಕಾರದಿಂದ ಪಡೆದಿರುವ ನಿರಾಕ್ಷೇಪಣ ಪ್ರಮಾಣಪತ್ರ.

(2) ಮೇಲ್ಕಂಡ ದಾಖಲೆಗಳು ನಿಗದಿತ ನಮೂನೆಗಳಲ್ಲಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕಕ್ಕೆ ಮೊದಲು ಪಡೆದ ದಾಖಲೆಗಳಾಗಿರಬೇಕು ಹಾಗೂ ಸದರಿ ದಾಖಲೆಗಳ ಮೂಲ ದಾಖಲೆಗಳನ್ನು ಪರಿಶೀಲನೆ ಸಮಯದಲ್ಲಿ ಹಾಜರುಪಡಿಸಬೇಕು. ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ನಂತರ ಪಡೆದ ದಾಖಲೆಗಳನ್ನು ಪರಿಗಣಿಸಲಾಗುವುದಿಲ್ಲ.

(3) ಸಂದರ್ಶನಕ್ಕೆ/ದಾಖಲಾತಿ ಪರಿಶೀಲನೆಗೆ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಹಾಜರಾಗಬೇಕು.

(4) ಈ ನೇಮಕಾತಿ ಸಂಬಂಧವಾಗಿ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರ ನಡೆಸಲು ಆಸ್ಪದವಿರುವುದಿಲ್ಲ.

(5) ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವುದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವುದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವುದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವುದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವುದು ಅಥವಾ ಅನುಸರಿಸಲು ಪ್ರಯತ್ನಿಸಿರುವುದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಬಿಸಿರುವುದು ಕಂಡುಬಂದಲ್ಲಿ ಅವರ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು ಅಲ್ಲದೇ ಅಭ್ಯರ್ಥಿಯನ್ನು ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲಾಗುವುದು.

(ಪಿ. ಕೃಷ್ಣ ಭಟ್)
ಪ್ರಧಾನ ಜಿಲ್ಲಾ ಮತ್ತು ಸೆಷನ್ಸ್ ನ್ಯಾಯಾಧೀಶರು,
ಬೆಂಗಳೂರು ಗ್ರಾಮಾಂತರ ಜಿಲ್ಲೆ, ಬೆಂಗಳೂರು